# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | ~~1010~~ (1017) 1017 |
| ಮಾನ್ಯ ಸದಸ್ಯರ ಹೆಸರು | ಶ್ರೀ.ಸಿ.ಪಿ.ಯೋಗೇಶ್ವರ್ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 23.02.2024 |
| ಉತ್ತರಿಸುವ ಸಚಿವರು | ಮಾನ್ಯ ಪರಿಶಿಷ್ಟ ಪಂಗಡಗಳ ಕಲ್ಯಾಣ, ಯುವ ಸಬಲೀಕರಣ ಹಾಗೂ ಕ್ರೀಡಾ ಸಚಿವರು |

| ಕ್ರ. ಸಂ. | ಪ್ರಶ್ನೆ. | ಉತ್ತರ. |
|---|---|---|
| ಅ | ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಿಂದ ತುಮಕೂರು ಜಿಲ್ಲೆ ಪಾವಗಡ ತಾಲ್ಲೂಕು ಗೌಡೇಟಿ ಮತ್ತು ವಿರುಪಸಮುದ್ರ ಗ್ರಾಮದ ಫಲಾನುಭವಿಗಳಿಗೆ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಮಂಜೂರಾಗಿರುವ ಕೊಳವೆಬಾವಿಗಳನ್ನು ತಡೆಹಿಡಿದಿರುವುದರಿಂದ ಫಲಾನುಭವಿಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ ಯಾವ ಉದ್ದೇಶಕ್ಕೆ ತಡೆಹಿಡಿಯಲಾಗಿದೆ: (ಸಂಪೂರ್ಣ ಮಾಹಿತಿ ಒದಗಿಸುವುದು) | ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಿಂದ ಗಂಗಾ ಕಲ್ಯಾಣ ಯೋಜನೆಯಡಿ ತುಮಕೂರು ಜಿಲ್ಲೆಯ ಪಾವಗಡ ತಾಲ್ಲೂಕಿನ ಗೌಡೇಟಿ ಮತ್ತು ವಿರುಪಸಮುದ್ರ ಗ್ರಾಮದಲ್ಲಿ ನೀರಾವರಿ ಕೊಳವೆಬಾವಿ ಸೌಲಭ್ಯಕ್ಕಾಗಿ ಆಯ್ಕೆಯಾದ ಫಲಾನುಭವಿಗಳ ಜಮೀನಿನಲ್ಲಿ ಕೊಳವೆಬಾವಿ ಕೊರೆಯುವ ಕಾರ್ಯವನ್ನು ತಡೆಹಿಡಿದಿರುವುದಿಲ್ಲ. ಜಿಲ್ಲೆಯಲ್ಲಿ ಎಪ್ಯಾಂನೆಲ್‌ಮೆಂಟ್ ಆಗಿ ಆಯ್ಕೆಯಾಗಿರುವ ಗುತ್ತಿಗೆದಾರರಿಗೆ ಡಿ.ಬಿ.ಟಿ ತಂತ್ರಾಂಶದಲ್ಲಿ ಕೊಳವೆಬಾವಿ ಕೊರೆಯಲು ಮ್ಯಾಪಿಂಗ್ ಮಾಡಿದ್ದು, ಪಾವಗಡ ವಿಧಾನಸಭಾ ಕ್ಷೇತ್ರದಲ್ಲಿ ಕೊಳವೆಬಾವಿ ಕೊರೆಯುವ ಕೆಲಸ ಪ್ರಗತಿಯಲ್ಲಿರುತ್ತದೆ. |
| ಆ | ಫಲಾನುಭವಿಗಳ ಖಾತೆಗೆ ಈಗಾಗಲೇ 6 ತಿಂಗಳು ಹಿಂದೆಯೇ ಹಣ ಡಿ.ಬಿ.ಟಿ ಆಗಿದ್ದು, ಯಾವ ಕಾಲಮಿತಿಯೊಳಗೆ ಕೊಳವೆಬಾವಿ ಕೊರೆಯಲಾಗುವುದು. ಇದಕ್ಕಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಗಂಗಾ ಕಲ್ಯಾಣ ಯೋಜನೆಯಡಿ ಸರ್ಕಾರದ ಆದೇಶದಂತೆ ಡಿ.ಬಿ.ಟಿ ಮೂಲಕ ಅನುಷ್ಠಾನಗೊಳಿಸಲು ಆದೇಶಿಸಿರುವ ಹಿನ್ನಲೆಯಲ್ಲಿ ಡಿ.ಬಿ.ಟಿ ತಂತ್ರಾಂಶದಲ್ಲಿ ಫಲಾನುಭವಿಗಳು ನೀಡಿರುವ (Consent) ಒಪ್ಪಿಗೆ ಪತ್ರದನ್ವಯ ಮ್ಯಾಪಿಂಗ್ ಮಾಡಲಾಗಿದ್ದು, ಕೊಳವೆಬಾವಿ ಕೊರೆಯುವ ಕೆಲಸ ಪ್ರಗತಿಯಲ್ಲಿರುತ್ತದೆ. ಶೀಘ್ರವಾಗಿ ಎಲ್ಲಾ ಕೊಳವೆಬಾವಿಗಳನ್ನು ಕೊರೆದು ಪ್ರಗತಿ ಸಾಧಿಸಲಾಗುವುದು. |

STW/SECB/STP/98/2024

(ಬಿ. ನಾಗೇಂದ್ರ)
ಪರಿಶಿಷ್ಟ ಪಂಗಡಗಳ ಕಲ್ಯಾಣ,
ಯುವ ಸಬಲೀಕರಣ ಹಾಗೂ ಕ್ರೀಡಾ ಸಚಿವರು